ಈ) ರಾಜ್ಯದ ಎಲ್ಲಾ ಐದು ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಪ್ರಸ್ತುತ ಸರ್ಕಾರ ಮಾಡಿರುವ ಘೋಷಣೆಯಂತೆ, ಬೆಂಗಳೂರು ನಗರದಲ್ಲಿ ದಿನವಹಿ 23 ಗಂಟೆಗಳ ಕಾಲ ಇತರೆ ನಗರ/ಪಟ್ಟಣ ಪ್ರದೇಶಗಳಲ್ಲಿ 22 ಗಂಟೆಗಳ ಕಾಲ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 6 ಗಂಟೆಗಳ ಕಾಲ 3 ಫೇಸ್ ಮತ್ತು 6 ಗಂಟೆಗಳ ಕಾಲ ಸಿಂಗಲ್ ಫೇಸ್‌ನಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಉ) ರಾಜ್ಯದ 5 ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ತಾಲ್ಲೂಕುವಾರು ನಗರ/ಪಟ್ಟಣವಾರು ದಿನವಹಿ ಮಿಲಿಯನ್ ಯೂನಿಟ್ ಗಳನ್ನು ನಿಗದಿಪಡಿಸುತ್ತಿಲ್ಲ. ಬೆಂಗಳೂರು ನಗರಕ್ಕೆಂದೇ ಪ್ರತ್ಯೇಕವಾಗಿ ದಿನವಹಿ ಮಿಲಿಯನ್ ಯೂನಿಟ್‌ಗಳನ್ನು ನಿಗದಿಪಡಿಸುತ್ತಿಲ್ಲ. ವಿದ್ಯುತ್ ಸರಬರಾಜು ಕಂಪನಿಗಳ ವಿದ್ಯುತ್ ಬೇಡಿಕೆಗಳನ್ನು ಕ್ರೋಢೀಕರಿಸಿ, ವಿವಿಧ ವಿದ್ಯುತ್ ಮೂಲಗಳ ಉತ್ಪಾದನಾ ಸಾಮರ್ಥ್ಯವನ್ನು ಆಧರಿಸಿ, ಲಭ್ಯತೆಗೆ ಅನುಗುಣವಾಗಿ ರಾಜ್ಯ ಸರ್ಕಾರವು ವಿವಿಧ ವಿದ್ಯು ವಿತರಣಾ ಕಂಪನಿಗಳಿಗೆ ಶೇಕಡವಾರು ವಿದ್ಯುತ್ ಹಂಚಿಕೆ ಮಾಡುತ್ತಿದೆ.

ಊ) ಲಭ್ಯತೆಗೆ ಅನುಗುಣವಾಗಿ ವಿದ್ಯುತ್ತನ್ನು ಶೇಕಡವಾರು ಹಂಚಿಕೆ ಮಾಡಲಾಗುವುದು.

ನಾಗಮಂಗಲವನ್ನು ಪಟ್ಟಣ ಪಂಚಾಯತಿಯಿಂದ ಮೇಲ್ದರ್ಜೆಗೇರಿಸುವುದು

242 (508) ಶ್ರೀ ಸುರೇಶ್‌ಗೌಡ (ನಾಗಮಂಗಲ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆ, ನಾಗಮಂಗಲ ಪಟ್ಟಣವನ್ನು ಟೌನ್ ಪಂಚಾಯತಿಯಿಂದ ಪುರಸಭೆ ಹಂತಕ್ಕೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಮುಖ್ಯಮಂತ್ರಿಯವರ ವಿಶೇಷ ಅನುದಾನದ ಮಂಜೂರಾತಿ

244 (493) ಶ್ರೀ ತನ್ವೀರ್ ಸೇಠ್ (ನರಸಿಂಹರಾಜ) : ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮುಖ್ಯಮಂತ್ರಿಯವರ 100 ಕೋಟಿ ರೂಪಾಯಿಗಳ ವಿಶೇಷ ಅನುದಾನವನ್ನು ಎಷ್ಟು ನಗರ ಪಾಲಿಕೆಗಳಿಗೆ ಮಂಜೂರು ಮಾಡಲಾಯಿತು;

ಆ) ಈ 100 ಕೋಟಿ ರೂಪಾಯಿಗಳ ಅನುದಾನವನ್ನು ನಗರ ಪಾಲಿಕೆಗಳು ಹೇಗೆ ವೆಚ್ಚ ಮಾಡಬಹುದೆಂಬುದಕ್ಕೆ ಸರ್ಕಾರವು ಮಾರ್ಗದರ್ಶಿ ಸೂತ್ರವನ್ನು (ಗೈಡ್‌ಲೈನ್ಸ್) ನೀಡಲಾಗಿತ್ತೆ;

ಇ) ಮೈಸೂರು ಮಹಾನಗರ ಪಾಲಿಕೆಯನ್ನು ಹೊರತುಪಡಿಸಿ, ಉಳಿದ ನಗರ ಪಾಲಿಕೆಗಳು ಈ ವಿಶೇಷ ಅನುದಾನವನ್ನು ಹೇಗೆ ವೆಚ್ಚ ಮಾಡಲಾಯಿತು;

ಈ) ಇದರಲ್ಲಿ ಪ್ರತಿ ವಿಧಾನಸಭೆಗೆ ಎಷ್ಟು ಅನುದಾನವನ್ನು ಮಂಜೂರು ಮಾಡಲಾಯಿತು;

ಉ) ಮೈಸೂರು ಮಹಾನಗರ ಪಾಲಿಕೆಗೆ ಮಂಜೂರಾಗಿದ್ದ 100 ಕೋಟಿ ರೂಪಾಯಿಗಳ ಮುಖ್ಯಮಂತ್ರಿಯವರ ವಿಶೇಷ ಅನುದಾನ ಸಮರ್ಪಕವಾಗಿ ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಸದರಿ 100 ಕೋಟಿ ರೂಪಾಯಿಗಳ ಅನುದಾನದಲ್ಲಿ ಯಾವ ಯಾವ ಪ್ರಸ್ತಾವನೆಗಳನ್ನು ಸಲ್ಲಿಸಲಾಯಿತು; ಯಾವ ಯಾವ ಪ್ರಸ್ತಾವನೆಗಳು ಮಂಜೂರಾದವು; ಯಾವ ಯಾವ ಕಾಮಗಾರಿಗಳು ಪ್ರಗತಿಯಲ್ಲಿವೆ ಹಾಗೂ ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ.

ಋ) 2010–11ನೇ ಸಾಲಿಗೂ 100 ಕೋಟಿ ರೂಪಾಯಿಗಳ ವಿಶೇಷ ಅನುದಾನವನ್ನು ಮಂಜೂರು ಮಾಡಲು ಸರ್ಕಾರವು ಉದ್ದೇಶಿಸಿದೆಯೇ?

ಶ್ರೀ ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಮುಖ್ಯಮಂತ್ರಿಯವರ ರೂ. 100 ಕೋಟಿ ರೂಪಾಯಿಗಳ ವಿಶೇಷ ಅನುದಾನದ ಯೋಜನೆಯನ್ನು ರಾಜ್ಯದ ಏಳು ಮಹಾನಗರ ಪಾಲಿಕೆಗಳಾದ ಮೈಸೂರು, ಮಂಗಳೂರು, ಗುಲ್ಬರ್ಗಾ, ಬಳ್ಳಾರಿ, ಬೆಳಗಾಂ,